# ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿ.,

**ಐಎಸ್‌ಓ ಪ್ರಮಾಣೀಕೃತ – ಶಾಸನಬದ್ಧ ಸಹಕಾರಿ ಸಂಸ್ಥೆ**

**ನಿರ್ಮಾಣ ಭವನ, ಡಾ. ರಾಜಕುಮಾರ ರಸ್ತೆ, 1ನೇ ಬ್ಲಾಕ್, ರಾಜಾಜಿನಗರ, ಬೆಂಗಳೂರು–560010.**

**www.souharda.coop, Ph: 080-23378375-80, E-mail: souharda@souharda.coop**


---

**ಸಂಖ್ಯೆ : ಸಂಸ/ಶಿವಿ/ತ–3/1/2017–18** **ದಿನಾಂಕ: 25.04.2017**

**ಇವರಿಗೆ :**

ಮಾನ್ಯ ಅಧ್ಯಕ್ಷರು/ಮುಖ್ಯಕಾರ್ಯನಿರ್ವಾಹಕರು

ರಾಜ್ಯದ ಎಲ್ಲಾ ಸೌಹಾರ್ದ ಸಹಕಾರಿಗಳು.

**ಮಾನ್ಯರೇ,**

**ವಿಷಯ : ಸೌಹಾರ್ದ ಸಹಕಾರಿಗಳ ಸಿಬ್ಬಂದಿಗಳಿಗಾಗಿ ಆಯೋಜಿಸುವ – 10 ದಿನಗಳ ವ್ಯಕ್ತಿತ್ವ ವಿಕಸನ ವಿಶೇಷ ತರಬೇತಿಗೆ ಪ್ರತಿನಿಧಿಗಳನ್ನು ಕಳುಹಿಸುವ ಕುರಿತು.**

ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿಯು ಶಾಸನಬದ್ಧವಾಗಿ ರಚನೆಗೊಂಡು, ಅರೆನ್ಯಾಯಿಕ ಅಧಿಕಾರವನ್ನು ಹೊಂದಿ ಕಾರ್ಯನಿರ್ವಹಿಸುತ್ತಿರುವ ಸೌಹಾರ್ದ ಸಹಕಾರಿಗಳ ಮಾತೃ ಸಂಸ್ಥೆಯಾಗಿದೆ. ಜೊತೆಗೆ ರಾಜ್ಯದ ಸೌಹಾರ್ದ ಸಹಕಾರಿಗಳ ಅಭಿವೃದ್ಧಿಗೆ ಪೂರಕವಾಗುವಂತಹ ಹಲವಾರು ತರಬೇತಿ ಕಾರ್ಯಕ್ರಮಗಳನ್ನು ರಾಜ್ಯಾದ್ಯಂತ ಹಮ್ಮಿಕೊಳ್ಳುತ್ತ ಬಂದಿದೆ. ಅದರಲ್ಲಿ ಪ್ರಮುಖವಾಗಿ, ಸೌಹಾರ್ದ ಸಹಕಾರ ಕ್ಷೇತ್ರದ, ಸೌಹಾರ್ದ ಸಹಕಾರಿಗಳ ಕಾರ್ಯಚಟುವಟಿಕೆಗಳ ಮಾಹಿತಿ, ಜ್ಞಾನವನ್ನು ಒದಗಿಸುವುದರೊಂದಿಗೆ ವ್ಯಕ್ತಿತ್ವ ವಿಕಸನಕ್ಕೆ ಕೂಡ ಪೂರಕವಾಗುವಂತಹ ವಿಶಿಷ್ಠವಾದ 10 ದಿನಗಳ ತರಬೇತಿಯನ್ನು ಕಳೆದ ಎಂಟು ವರ್ಷಗಳಿಂದ ಆಯೋಜಿಸುತ್ತ ಬರಲಾಗಿದೆ. ಈ ಕಾರ್ಯಕ್ರಮಗಳು ಹೆಚ್ಚು ಪ್ರಯೋಜನಕಾರಿಯಾಗಿವೆ, ವ್ಯಕ್ತಿತ್ವ ವಿಕಸನಕ್ಕೆ ಉತ್ತಮ ಅವಕಾಶವಾಗಿತ್ತೆಂದು ಶಿಬಿರಾರ್ಥಿಗಳು ಹಾಗೂ ಅತಿಥಿ ಗಣ್ಯರು ಅಭಿಪ್ರಾಯ ನೀಡಿದ್ದಾರೆ.

ಪ್ರಸ್ತುತ, ಸೌಹಾರ್ದ ಸಹಕಾರಿಗಳ ಸಿಬ್ಬಂದಿಗಳಿಗಾಗಿ ಆಯೋಜಿಸುವ – 10 ದಿನಗಳ ವ್ಯಕ್ತಿತ್ವ ವಿಕಸನ ವಿಶೇಷ ತರಬೇತಿಯ 17ನೇ ತಂಡದ ತರಬೇತಿ ಕಾರ್ಯಕ್ರಮವನ್ನು **ಪ್ರಾದೇಶಿಕ ಆಡಳಿತ ಸಹಕಾರ ನಿರ್ವಹಣಾ ಸಂಸ್ಥೆ, ಪದ್ಮನಾಭನಗರ, ಬನಶಂಕರಿ 2ನೇ ಹಂತ, ಬೆಂಗಳೂರು** ಇಲ್ಲಿ **ದಿನಾಂಕ 19 ರಿಂದ 28 ಜೂನ್ 2017** ರವರೆಗೆ ನಡೆಸಲು ತೀರ್ಮಾನಿಸಲಾಗಿದೆ. ಸೌಹಾರ್ದ ಸಹಕಾರಿಗಳ ಅಭಿವೃದ್ಧಿಯ ದೃಷ್ಟಿಯಿಂದ ಇಂತಹ ವಿಶೇಷ ತರಬೇತಿ ಕಾರ್ಯಕ್ರಮಗಳಲ್ಲಿ ಭಾಗವಹಿಸಲು ಅಭ್ಯರ್ಥಿಗಳನ್ನು ಕಳುಹಿಸುವುದು ಅಗತ್ಯವೆನಿಸುತ್ತದೆ.

ಕಾರ್ಯಕ್ರಮದಲ್ಲಿ 50 ಜನರಿಗೆ ಮಾತ್ರ ಭಾಗವಹಿಸಲು ಅವಕಾಶವಿರುವುದರಿಂದ ಮೊದಲು ಅರ್ಜಿಯನ್ನು ಸಲ್ಲಿಸಿದವರಿಗೆ ಆದ್ಯತೆ ನೀಡಲಾಗುವುದು. ಭಾಗವಹಿಸುವವರ ಸಂಖ್ಯೆ ನಿಗಧಿತ ಸಂಖ್ಯೆಗಿಂತ ಹೆಚ್ಚಾದಲ್ಲಿ ಡಿಸೆಂಬರ್ 2017ರಲ್ಲಿ ಜರುಗುವ 18ನೇ ತಂಡದ ತರಬೇತಿಗೆ ಅವಕಾಶ ಮಾಡಿಕೊಡಲಾಗುವುದು. ತರಬೇತಿ ಪಡೆದಿರುವುದಕ್ಕೆ ಪ್ರಮಾಣ ಪತ್ರ ನೀಡಲಾಗುವುದು. ಸೌಹಾರ್ದ ಸಹಕಾರಿಗಳು ತಮ್ಮ ಸಹಕಾರಿಯಿಂದ ಭಾಗವಹಿಸುವ ಅಭ್ಯರ್ಥಿಗಳ ತರಬೇತಿ ಶುಲ್ಕ ಹಾಗೂ ಪ್ರಯಾಣ ವೆಚ್ಚವನ್ನು ಭರಿಸಬೇಕು. ಸಂಯುಕ್ತ ಸಹಕಾರಿಯು ಲಗತ್ತಿಸಿದ ನೋಂದಾವಣೆ ಅರ್ಜಿ ನಮೂನೆಯಲ್ಲಿ, ತಾವು ಕಳುಹಿಸುವ ಅಭ್ಯರ್ಥಿಗಳ ಹೆಸರು, ವಿಳಾಸ, ನಿರ್ವಹಿಸುತ್ತಿರುವ ಹುದ್ದೆ, ಇತ್ಯಾದಿ ವಿವರಗಳನ್ನು ಪ್ರತ್ಯೇಕವಾಗಿ ಭರ್ತಿಮಾಡಿ ಕಳುಹಿಸಿ ಭಾಗವಹಿಸುವಿಕೆಯನ್ನು ಖಚಿತಪಡಿಸಲು ತಿಳಿಸಿದೆ.

**ತರಬೇತಿ ಕಾರ್ಯಕ್ರಮದ ವಿವರಗಳು**

- **ಭಾಗವಹಿಸುವ ವರ್ಗ** : ಕಾರ್ಯದರ್ಶಿಗಳು, ಮುಖ್ಯಕಾರ್ಯನಿರ್ವಾಹಕರು, ಅಧಿಕಾರಿಗಳು ಹಾಗೂ ಸಿಬ್ಬಂದಿಗಳು
- **ತರಬೇತಿಯ ಅವಧಿ** : 6 ದಿನ ಒಳಾಂಗಣ, 2 ದಿನ ಪ್ರಾಯೋಗಿಕ, 2 ದಿನ ಅಧ್ಯಯನ ಪ್ರವಾಸ – ಒಟ್ಟೂ 10 ದಿನ.
- **ತರಬೇತಿಯ ಸ್ಥಳ** : ಪ್ರಾದೇಶಿಕ ಆಡಳಿತ ಸಹಕಾರ ನಿರ್ವಹಣಾ ಸಂಸ್ಥೆ, ಪದ್ಮನಾಭನಗರ, ಬೆಂಗಳೂರು.
- **ತರಬೇತಿ ಶುಲ್ಕ** : ರೂ.5000/– ತಲಾ ಒಬ್ಬರಿಗೆ – ಊಟ, ವಸತಿ ಹಾಗೂ ಇತರೆ ವ್ಯವಸ್ಥೆಗಳಿಗಾಗಿ.
- **ಅಭ್ಯರ್ಥಿಗಳ ಸಂಖ್ಯೆ** : 50 ಮಾತ್ರ
- **ತರಬೇತಿಯ ದಿನಾಂಕ**: 19 ರಿಂದ 28 ಜೂನ್ 2017ರ ವರೆಗೆ
- **ತರಬೇತಿ ಸೌಲಭ್ಯ** : ಊಟ, ಉಪಹಾರ, ವಸತಿ, ಅಧ್ಯಯನ ಸಾಹಿತ್ಯ, ಯೋಗ ತರಬೇತಿ, ಆರೋಗ್ಯ ತಪಾಸಣೆ ಹಾಗೂ ಉತ್ತಮ ಸಹಕಾರಿ/ಸಂಸ್ಥೆಗಳಿಗೆ ಅಧ್ಯಯನ ಭೇಟಿ. ಮಹಿಳೆಯರಿಗೆ ಪ್ರತ್ಯೇಕ ವಸತಿ ವ್ಯವಸ್ಥೆ ಇರುತ್ತದೆ.
- ತರಬೇತಿಯ ನೋಂದಣಿ ಶುಲ್ಕವನ್ನು **ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿ., ಬೆಂಗಳೂರು** ಇದರ ಹೆಸರಿನಲ್ಲಿ ಚೆಕ್/ಡಿಡಿಯನ್ನು ಕಳುಹಿಸುವ ಮೂಲಕ ಪಾವತಿಸುವುದು.
- ನೋಂದಾವಣೆಗೆ ಕೊನೆಯ **ದಿನಾಂಕ 31.05.2017.**

**ತರಬೇತಿ ವಿಷಯಗಳು**

- ಸಹಕಾರ ಚಳುವಳಿಯ ಹುಟ್ಟು ಬೆಳವಣಿಗೆ – ಸಹಕಾರ ತತ್ವಗಳು – ಸಹಕಾರ ಕಾಯ್ದೆ – ಸೌಹಾರ್ದ ಸಹಕಾರ ಕಾಯ್ದೆ ಆಶಯ – ಹುಟ್ಟು, ಬೆಳವಣಿಗೆ, ಕಾಯ್ದೆಯ ಮುಖ್ಯಾಂಶಗಳು.
- ಸಹಕಾರ ಕಾಯ್ದೆ ಹಾಗೂ ಸೌಹಾರ್ದ ಸಹಕಾರ ಕಾಯ್ದೆ ವ್ಯತ್ಯಾಸಗಳು, ಸೌಹಾರ್ದ ಸಹಕಾರಿಗಳ ಉಪವಿಧಿಗಳು ತಿದ್ದುಪಡಿ ವಿಧಾನ – ಸಂಯುಕ್ತ ಸಹಕಾರಿಯ ಕಾರ್ಯಚಟುವಟಿಕೆಗಳು – ಸಹಕಾರ ಕ್ಷೇತ್ರದ ಪ್ರಚಲಿತ ವಿಷಯಗಳು.
- ಕಚೇರಿ ಆಡಳಿತ ನಿರ್ವಹಣೆ – ಕಡತಗಳ ನಿರ್ವಹಣೆ – ಸಮಯ ಪಾಲನೆ.
- ಸಭೆಗಳು – ಆಡಳಿತ ಮಂಡಲಿ ಸಭೆ – ವಾರ್ಷಿಕ ಸಾಮಾನ್ಯ ಸಭೆ – ವಿಶೇಷ ಸಭೆ – ಪ್ರಾಯೋಗಿಕ–1
- ಸೌಹಾರ್ದ ಸಹಕಾರಿಗಳ ಲೆಕ್ಕಪತ್ರಗಳ ನಿರ್ವಹಣೆ – ಜಮಾ ಖರ್ಚು – ಲಾಭ ನಷ್ಟ ತಖ್ತೆ – ಆಸ್ತಿ ಜವಾಬ್ದಾರಿ ತಃಖ್ತೆ – ಸಮನ್ವಯ ಪಟ್ಟಿ ಸಿದ್ಧಪಡಿಸುವುದು ಹಾಗೂ ವಿಶ್ಲೇಷಿಸುವುದು – ಪ್ರಾಯೋಗಿಕ–2
- ಹಣಕಾಸಿನ ನಿರ್ವಹಣೆ – ಸಂಪನ್ಮೂಲಗಳ ಕ್ರೂಢೀಕರಣ, ಲಾಭದಾಯಕ ಹೂಡಿಕೆ – ಬಡ್ಡಿಯೇತರ ಆದಾಯಗಳು.
- ಸಾಲಗಳ ನಿರ್ವಹಣೆ – ಗುಣಮಟ್ಟಗಳ ಸಾಲ ನೀಡಿಕೆ – ಸಾಲ ವಸೂಲಾತಿ ಕ್ರಮಗಳು – ಮಾರಾಟಗಾರನ ಕರ್ತವ್ಯಗಳು – ದಾವಾ ದಾಖಲಾತಿ ವಿಧಾನ, ಅಮಲ್ಜಾರಿ ಕ್ರಮಗಳು.
- ಸಾಲ ಪತ್ರ ದಾಖಲಾತಿ & ದಾವಾ ದಾಖಲಾತಿ – ಪ್ರಾಯೋಗಿಕ 03 & 04.
- ಗ್ರಾಹಕ ಸೇವೆಗಳ ನಿರ್ವಹಣೆ – ವ್ಯವಹಾರ ಅಭಿವೃದ್ಧಿ ಯೋಜನೆ – ಡಿಜಿಟಲ್ ಬ್ಯಾಂಕಿಂಗ್ – ನಗದುರಹಿತ ಆರ್ಥಿಕತೆ – ಆದಾಯ ತೆರಿಗೆ ಕಾಯ್ದೆ ತಿದ್ದುಪಡಿ 269ಎಸ್‌ಟಿ ವಿವರಗಳ ಬಗ್ಗೆ ಮಾಹಿತಿ.
- ಒತ್ತಡ ನಿರ್ವಹಣೆ – ವ್ಯಕ್ತಿತ್ವ ವಿಕಸನ – ಮಾನವೀಯ ಮೌಲ್ಯಗಳ ನಿರ್ವಹಣೆ – ಆಂತರಿಕ ಸಂಬಂಧಗಳ ನಿರ್ವಹಣೆ ಹಾಗೂ ಇತರೆ ಮಹತ್ವದ ಅಗತ್ಯ ವಿಷಯಗಳು.
- ಯೋಗ – ಧ್ಯಾನ – ಪ್ರಾಣಾಯಾಮ – ಆರೋಗ್ಯ ಕಾರ್ಯಯೋಜನೆಯ ರಚನೆ.
- SWOT Analysis – ಮೌಲ್ಯಮಾಪನ – ಅನೌಪಚಾರಿಕ ಅವಧಿಗಳು – ಯಶಸ್ವಿ ಸಹಕಾರಿ ಸಂಸ್ಥೆಗಳೊಂದಿಗೆ ಸಂವಾದ ಇತ್ಯಾದಿ.

ವಂದನೆಗಳೊಂದಿಗೆ,

ಸಹಿ/–

(ಶರಣಗೌಡ ಜಿ. ಪಾಟೀಲ)

ವ್ಯವಸ್ಥಾಪಕ ನಿರ್ದೇಶಕ